ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ	:	1482(1709)
ಸದಸ್ಯರ ಹೆಸರು	:	ಡಾ. ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	23/03/2020.
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ನೌಕರರಿಗೆ ನೀಡುತ್ತಿರುವ ವೈದ್ಯಕೀಯ ಸವಲತ್ತಾದ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ಅನುದಾನಿತ ಶಾಲಾ ಶಿಕ್ಷಕರಿಗೆ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು; ಮತ್ತು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು?	ಬಂದಿದೆ. ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ, ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಆದುದರಿಂದ ಅವರಿಗೆ ಜ್ಯೋತಿ ಸಂಜೀವಿನಿ ಯೋಜನೆ ಅನ್ವಯವಾಗುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ, ಆದುದರಿಂದ ಇವರು ಜ್ಯೋತಿ ಸಂಜೀವಿನಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಿರುವುದಿಲ್ಲ.

ಇಪಿ 111 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.